11-8-25

1

**ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಡಿ.ಎಸ್. ಅರುಣ್ ರವರು ಶೂನ್ಯವೇಳೆ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ**

**ಪ್ರಶ್ನೆ:** ನಮ್ಮ ರಾಜ್ಯದ ಧಾರ್ಮಿಕ ಹೆಮ್ಮೆ ಮತ್ತು ಸಾಂಸ್ಕೃತಿಕ ಕೇಂದ್ರವಾಗಿರುವ ಧರ್ಮಸ್ಥಳ, ಲಕ್ಷಾಂತರ ಹಿಂದೂ ಭಕ್ತರ ಭಾವನೆಯ ಕೇಂದ್ರವಾಗಿದೆ. ಇಂತಹ ಪವಿತ್ರ ಸ್ಥಳದ ವಿರುದ್ಧ, ಅನಾಮಿಕ ವ್ಯಕ್ತಿಯೊಬ್ಬರು ಯಾವುದೇ ದೃಢವಾದ ಸಾಕ್ಷ್ಯವಿಲ್ಲದೆ ಆರೋಪ ಮಾಡಿರುವುದರ ಕುರಿತು ಇತ್ತೀಚಿಗೆ ಬಹಳಷ್ಟು ದೃಶ್ಯ ಮಾಧ್ಯಮದಲ್ಲಿ, ಡಿಜಿಟಲ್ ಪ್ಲಾಟ್‌ಫಾರ್ಮಿನಲ್ಲಿ ವರದಿ ಪ್ರಕಟವಾಗಿರುತ್ತದೆ.

ಇಂತಹ ಸಂಗತಿ ಅತ್ಯಂತ ಖಂಡನೀಯ ಮತ್ತು ಹಿಂದೂ ಸಮಾಜದ ಭಾವನೆಗೆ ಅವಮಾನವಾಗಿದೆ. ಇಂತಹ ಸುಳ್ಳು ಮತ್ತು ಉದ್ದೇಶಪೂರಿತ ಆರೋಪಗಳಿಂದ ಸನಾತನ ಧರ್ಮದ ಪಾವಿತ್ರ್ಯಕ್ಕೆ ಧಕ್ಕೆ ಉಂಟುಮಾಡುವುದು ಧರ್ಮ ವಿರೋಧಿ ಶಕ್ತಿಗಳ ಹಳೆಯ ನಿಟ್ಟೆ ಹಿಂದೂ ಧರ್ಮ, ಹಿಂದೂತ್ವದ ಮೌಲ್ಯಗಳು ಹಾಗೂ ಧರ್ಮಸ್ಥಳದ ಹೆಗ್ಗಳಿಕೆಯನ್ನು ಹಾಳುಮಾಡಲು ಇಂತಹ ಯತ್ನಗಳು ನಡೆಯುತ್ತಾ ಬಂದಿವೆ.

ಜನರ ಭಕ್ತಿ ಭಾವನೆಗೆ ಧಕ್ಕೆ ಉಂಟುಮಾಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ಸರ್ಕಾರ ಬದ್ಧವಾಗಿರಬೇಕು. ತನಿಖೆಯನ್ನು ತ್ವರಿತಗೊಳಿಸಿ, ಈ ಆರೋಪದ ಹಿಂದಿರುವ ನಿಜಸ್ವರೂಪವನ್ನು ಬಹಿರಂಗಪಡಿಸಬೇಕು, ಸದನದ ಮೂಲಕ ಗೃಹ ಸಚಿವರನ್ನು ಬಲವಾಗಿ ತನಿಖೆಯ ಪ್ರಗತಿ ವರದಿಯನ್ನು ಸಾರ್ವಜನಿಕರಿಗೆ ಬಹಿರಂಗಪಡಿಸಿ, ಹಿಂದೂ ಧರ್ಮದ ಪಾವಿತ್ರ್ಯವನ್ನು ಹಾಳುಮಾಡಲು ಯತ್ನಿಸುವವರ ವಿರುದ್ಧ ಶೂನ್ಯ ಸಹಿಷ್ಣುತೆ ನೀತಿ ಅನುಸರಿಸಬೇಕು ಎಂಬುದರ ಕುರಿತು.

**ಉತ್ತರ:** ಅನಾಮಿಕ ವ್ಯಕ್ತಿ ನೀಡಿದ ದೂರಿನ ಮೇರೆಗೆ ಧರ್ಮಸ್ಥಳ ಪೊಲೀಸ್ ಠಾಣೆಯಲ್ಲಿ ಅಪರಾಧ ಸಂಖ್ಯೆ: 39/2025 ಕಲಂ 211(ಎ) ಬಿ.ಎನ್.ಎಸ್ ರನ್ವಯ ಪ್ರಕರಣ ದಾಖಲಾಗಿರುತ್ತದೆ. ಪ್ರಕರಣದ ಸೂಕ್ಷ್ಮತೆ ಮತ್ತು ಗಂಭೀರತೆಯನ್ನು ಪರಿಗಣಿಸಿ ಸದರಿ ಪ್ರಕರಣವನ್ನು ತನಿಖೆ ಮಾಡಲು, ರಾಜ್ಯ ಸರ್ಕಾರವು ಆದೇಶ ಸಂಖ್ಯೆ: ಹೆಚ್‌ಡಿ 142 ಸಿಒಡಿ 2025, ದಿನಾಂಕ: 19.07.2025 ರನ್ವಯ ಒಂದು ವಿಶೇಷ ತನಿಖಾ ತಂಡವನ್ನು ರಚಿಸಿರುತ್ತದೆ. ಈಗಾಗಲೇ ಸದರಿ ವಿಶೇಷ ತನಿಖಾ ತಂಡವು ತನಿಖೆಯನ್ನು ಕೈಗೊಂಡಿದ್ದು, ಎಲ್ಲಾ ಆಯಾಮಗಳಲ್ಲಿ ನಿಷ್ಪಕ್ಷಪಾತವಾಗಿ ತನಿಖೆಯನ್ನು ನಡೆಸುತ್ತಿದೆ. ಶೀಘ್ರವಾಗಿ ತನಿಖೆಯನ್ನು ಪೂರೈಸಲು ಎಲ್ಲಾ ಕ್ರಮಗಳನ್ನು ಕೈಗೊಳ್ಳಲಾಗುವುದು.

**ಸಂಖ್ಯೆ: ಹೆಚ್‌ಡಿ 36 ಎಸ್‌ಡಿಎನ್ 2025**

(ಡಾ: ಜಿ.ಪರಮೇಶ್ವರ)

ಗೃಹ ಸಚಿವರು